ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ಖಾಸಗಿ ಶಾಲೆಗಳಿಂದ ಶೋಷಣೆ

ಶ್ರೀ ಆರ್. ಧರ್ಮಸೇನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

19 (87) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಖಾಸಗಿ ಶಾಲೆಗಳವರು ಮಕ್ಕಳನ್ನು ಶಾಲೆಗೆ ಸೇರಿಸಿಕೊಳ್ಳುವಾಗ ಡೋನೇಷನ್ ಪಡೆಯುವುದರ ಜೊತೆಗೆ ಬೇರೆ ಬೇರೆ ಹೆಸರಿನಲಿ ಹೆಚ್ಚಿನ ಶಿಕ್ಷಣ ಶುಲ್ಕವನ್ನು ಪೋಷಕರಿಂದ ವಸೂಲು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸರ್ಕಾರ ಸುತ್ತೋಲೆ ಹೊರಡಿಸಿ ಇಂತಿಷ್ಟೇ ಹಣವನ್ನು ಪೋಷಕರಿಂದ ಪಡೆಯುವ ಬಗ್ಗೆ ನಿಗದಿಗೊಳಿಸಿದೆಯೇ;

(ಇ) ಖಾಸಗಿ ಶಾಲೆಗಳ ಶೋಷಣೆಯನ್ನು ತಪ್ಪಿಸಲು ಸರ್ಕಾರ ಜನಪರ ಕ್ರಮಗಳನ್ನು ಯಾವ ರೀತಿ ಕೈಗೊಳ್ಳುತ್ತದೆ?